# ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ನಡವಳಿಗಳು

**ವಿಷಯ:** ಶ್ರೀ ಪುರುಷೋತ್ತಮ.ಎನ್, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದೊಡ್ಡಕವಲಂದೆ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ (ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮಕಂದೂರು ಗ್ರಾಮ ಪಂಚಾಯತಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ) ಇವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಕುರಿತು.

**ಓದಲಾಗಿದೆ :** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಇವರ ಪತ್ರ ಸಂಖ್ಯೆ: ಸಿಸಿಎ/34136/2023-24, ದಿನಾಂಕ: 27.12.2023

*****

**ಪ್ರಸ್ತಾವನೆ:**

ಮೇಲೆ ಓದಲಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಇವರು ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ, ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕು ದೊಡ್ಡಕವಲಂದೆ ಗ್ರಾಮ ಪಂಚಾಯತಿಯಲ್ಲಿ "ಶೌಚಾಲಯ ನಿರ್ಮಿಸದೆ ಹಣ ಗುಳುಂ" ಎಂಬ ಶೀರ್ಷಿಕೆಯಡಿ ಪ್ರಕಟಣೆಗೊಂಡ ವರದಿಯನ್ನಾಧರಿಸಿ ಪರಿಶೀಲಿಸಲು ನಂಜನಗೂಡು ತಾಲ್ಲೂಕು ಪಂಚಾಯತಿ ಕಾರ್ಯಾಲಯದ ಅಧಿಕಾರಿಗಳನ್ನು ಒಳಗೊಂಡ ತನಿಖಾ ತಂಡವನ್ನು ರಚಿಸಿ, ಪರಿಶೀಲನಾ ವರದಿಯನ್ನು ಪಡೆಯಲಾಗಿರುತ್ತದೆ. ಸದರಿ ವರದಿಯಲ್ಲಿ, ದೊಡ್ಡಕವಲಂದೆ ಗ್ರಾಮ ಪಂಚಾಯತಿಯಲ್ಲಿ ಈ ಹಿಂದೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸಿರುವ ಶ್ರೀ ಪುರುಷೋತ್ತಮ.ಎನ್ ಇವರು 2020-21ನೇ ಸಾಲಿನಿಂದ 2022-23ನೇ ಸಾಲಿನವರೆಗೆ ರೂ.8,73,796/-ಗಳನ್ನು ನಿಯಮಬಾಹಿರವಾಗಿ ಗ್ರಾಮ ಪಂಚಾಯತಿಯ ಬಿಲ್ ಕಲೆಕ್ಟರ್ ಆದ ಶ್ರೀ ಪಿ.ಸೋಮಣ್ಣ ಇವರ ಖಾತೆಗೆ ವರ್ಗಾಯಿಸುವ ಮೂಲಕ ಹಾಗೂ ಸರ್ಕಾರದ ಮನರೇಗಾ ಯೋಜನೆಯ ಒಗ್ಗೂಡಿಸುವಿಕೆಯಡಿ ದೊಡ್ಡಕವಲಂದೆ ಗ್ರಾಮದ ಒಟ್ಟು ಮೂರು ಅಂಗನವಾಡಿ ಕೇಂದ್ರಗಳ ನಿರ್ಮಾಣಕ್ಕಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಬಿಡುಗಡೆ ಮಾಡಿರುವ ರೂ.9.00ಲಕ್ಷಗಳ ಅನುದಾನ, ದೊಡ್ಡಕವಲಂದೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶೌಚಾಲಯ ನಿರ್ಮಾಣಕ್ಕಾಗಿ ರೂ. 3.37ಲಕ್ಷಗಳು ಮತ್ತು ಪದವಿ ಪೂರ್ವ ಕಾಲೇಜಿನಲ್ಲಿ ಶೌಚಾಲಯ ನಿರ್ಮಾಣಕ್ಕಾಗಿ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಬಿಡುಗಡೆ ಮಾಡಿರುವ ರೂ.6.08ಲಕ್ಷಗಳ ಅನುದಾನ ಹಾಗೂ ಜಿಲ್ಲಾ ಪಂಚಾಯತಿಯಿಂದ ರೂ.8.00ಲಕ್ಷಗಳನ್ನು ಕರ್ನಾಟಕ ಗ್ರಾಮೀಣ ಬ್ಯಾಂಕ್, ನಂಜನಗೂಡು ಶಾಖೆಯ ಖಾತೆ ಸಂಖ್ಯೆ: 1212310001184 ಕ್ಕೆ ದಿನಾಂಕ: 30.05.2018 ರಿಂದ 30.03.2023 ರ ವರೆಗೆ ಜಮೆ ಮಾಡಲಾಗಿರುವ ಅನುದಾನ ಸೇರಿದಂತೆ ಒಟ್ಟು ರೂ. 26.45ಲಕ್ಷಗಳು ಗ್ರಾಮ ಪಂಚಾಯತಿಯ ವರ್ಗ-2 ರ ಖಾತೆಗೆ ಜಮೆಯಾಗಿದ್ದು, ದಿನಾಂಕ: 09.10.2023 ರ ಅಂತ್ಯಕ್ಕೆ ತಪಾಸಣೆ ವೇಳೆಯಲ್ಲಿ ಅಂತಿಮ ಶಿಲ್ಕು ರೂ. 13,14,132/-ಗಳು ಮಾತ್ರ ಲಭ್ಯವಿರುತ್ತದೆ. ಉಳಿಕೆ ಮೊತ್ತ ರೂ.13,30,868/-ಗಳನ್ನು ಅಂಗನವಾಡಿ ಕಟ್ಟಡ ಮತ್ತು ಶಾಲಾ ಕಾಲೇಜುಗಳ ಶೌಚಾಲಯಗಳನ್ನು ನಿರ್ಮಾಣ ಮಾಡದೆ ಅನ್ಯ ಉದ್ದೇಶಕ್ಕೆ ಬಳಸಿ ದುರುಪಯೋಗಪಡಿಸಿಕೊಂಡಿರುವುದರಿಂದ ಹಾಗೂ ಸದರಿ ನೌಕರರು ಪ್ರಸ್ತುತ ಕೊಡಗು ಜಿಲ್ಲೆ, ಮಡಿಕೇರಿ ತಾಲ್ಲೂಕು, ಮಕಂದೂರು ಗ್ರಾಮ ಪಂಚಾಯತಿಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವುದರಿಂದ, ಇವರ ವಿರುದ್ಧ ಶಿಸ್ತು ಕ್ರಮದ ಶಿಫಾರಸ್ಸಿನೊಂದಿಗೆ ಪೂರಕ ದಾಖಲೆಗಳನ್ನು ಸಲ್ಲಿಸಿರುತ್ತಾರೆ.

ಮೇಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಹಿಂದೆ ದೊಡ್ಡಕವಲಂದೆ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸಿರುವ ಶ್ರೀ ಪುರುಷೋತ್ತಮ.ಎನ್ ಇವರು ಅಂಗನವಾಡಿ ಕಟ್ಟಡ ನಿರ್ಮಾಣ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶೌಚಾಲಯ ಹಾಗೂ ಪದವಿ ಪೂರ್ವ ಕಾಲೇಜಿನ ಶೌಚಾಲಯಗಳ ನಿರ್ಮಾಣಕ್ಕಾಗಿ ಸರ್ಕಾರದಿಂದ ಬಿಡುಗಡೆ ಮಾಡಿರುವ ಒಟ್ಟು ರೂ. 26.45ಲಕ್ಷಗಳ ಅನುದಾನವನ್ನು ಅದೇ ಉದ್ದೇಶಕ್ಕೆ ಬಳಸದೇ ಹಾಗೂ ಕಾಮಗಾರಿಗಳ ಪ್ರಗತಿ ಮಾಡದೇ, ಅನ್ಯ ಉದ್ದೇಶಕ್ಕೆ ಬಳಸಿರುವುದು ಹಾಗೂ 2020-21ನೇ ಸಾಲಿನಿಂದ 2022-23ನೇ ಸಾಲಿನವರೆಗೆ ರೂ.8,73,796/-ಗಳನ್ನು ನಿಯಮಬಾಹಿರವಾಗಿ ಗ್ರಾಮ ಪಂಚಾಯತಿಯ ಬಿಲ್ ಕಲೆಕ್ಟರ್ ಆದ ಶ್ರೀ ಪಿ.ಸೋಮಣ್ಣ ಇವರ ಹೆಸರಿನ ಖಾತೆಗೆ ಹಣ ವರ್ಗಾಯಿಸಿ

...2

ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಸದರಿ ನೌಕರರ ವಿರುದ್ಧದ ಇಲಾಖಾ ವಿಚಾರಣೆ ಕಾಯ್ದಿರಿಸಿ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957 ರ ನಿಯಮ 10(1)(ಡಿ) ರನ್ವಯ ಸೇವೆಯಿಂದ ಅಮಾನತ್ತುಗೊಳಿಸಲು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡಂತೆ ಆದೇಶ.

**ಆದೇಶ ಸಂಖ್ಯೆ: KPRC-GPA0PDO/4/2024, ಬೆಂಗಳೂರು, ದಿನಾಂಕ: 06.01.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಗಾಗಿ, ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957 ರ ನಿಯಮ 10(1)(ಡಿ) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಪ್ರಿಯಾಂಕ ಮೇರಿ ಫ್ರಾನ್ಸಿಸ್, ಭಾ.ಆ.ಸೇ, ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆದ ನಾನು ಶ್ರೀ ಪುರುಷೋತ್ತಮ.ಎನ್, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದೊಡ್ಡಕವಲಂದೆ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ (ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮಕಂದೂರು ಗ್ರಾಮ ಪಂಚಾಯತಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ) ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ.

ಅಮಾನತ್ತುಗೊಂಡಿರುವ ನೌಕರರು ಕೆ.ಸಿ.ಎಸ್.ಆರ್ ನಿಯಮ 98 ರನ್ವಯ ಅಮಾನತ್ತಿನ ಅವಧಿಯಲ್ಲಿ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿದ್ದು, ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಕೇಂದ್ರ ಸ್ಥಾನ ಬಿಡತಕ್ಕದ್ದಲ್ಲ.

ಆರೋಪಿತ ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957 ರ ನಿಯಮ 11 ರಡಿ ಇಲಾಖಾ ವಿಚಾರಣೆಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಇವರು ನಡೆಸತಕ್ಕದ್ದು.

**(ಪ್ರಿಯಾಂಕ ಮೇರಿ ಫ್ರಾನ್ಸಿಸ್)**
ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು, ಪಂಚಾಯತ್ ರಾಜ್, ಗ್ರಾಅಪಂ.ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಮತ್ತು ಕೊಡಗು.
6. ಸಂಬಂಧಿಸಿದ ನೌಕರರಿಗೆ.
7. ಆಯುಕ್ತಾಲಯದ ವೆಬ್ ಸೈಟ್/ಶಾಖಾ ರಕ್ಷ ಕಡತ/ಹೆಚ್ಚುವರಿ ಪತ್ರಿ.